# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಹೆಚ್. ರಸ್ತೆ, ತುಮಕೂರು-572 103

**ಸಂಖ್ಯೆ:ತುವಿ:ಅ.ವಿ:ಸುತ್ತೋಲೆ:2024-25/1821** **ದಿನಾಂಕ:12.08.2024**

## : ಸುತ್ತೋಲೆ :

ವಿಷಯ: ಭಾರತ ಸ್ವಾತಂತ್ರ್ಯ ಅಮೃತ ಮಹೋತ್ಸವದ ಹಿನ್ನೆಲೆಯಲ್ಲಿ "ಹರ್ ಘರ್ ತಿರಂಗಾ" ಅಭಿಯಾನದ ಅಂಗವಾಗಿ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸುವ ಕುರಿತು.

ಉಲ್ಲೇಖ: 1. ಮಾನ್ಯ ಜಿಲ್ಲಾಧಿಕಾರಿಗಳ ಪತ್ರ ದಿನಾಂಕ:09.08.2024
2. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:12.08.2024

* * * * *

ಮಾನ್ಯ ಜಿಲ್ಲಾಧಿಕಾರಿಗಳು, ತುಮಕೂರು ಜಿಲ್ಲೆ, ತುಮಕೂರು ಇವರು ದಿನಾಂಕ:09.08.2024 ರಂದು ವಿಶ್ವವಿದ್ಯಾನಿಲಯಕ್ಕೆ ಪತ್ರ ಬರೆದು, ಭಾರತ ಸ್ವಾತಂತ್ರ್ಯ ಅಮೃತ ಮಹೋತ್ಸವದ ಹಿನ್ನೆಲೆಯಲ್ಲಿ "ಹರ್ ಘರ್ ತಿರಂಗಾ" ಅಭಿಯಾನದ ಅಂಗವಾಗಿ ದಿನಾಂಕ:15.08.2024 ರವರೆಗೆ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸುವಂತೆ ತಿಳಿಸಿರುತ್ತಾರೆ.

ಈ ಹಿನ್ನೆಲೆಯಲ್ಲಿ ಮಾನ್ಯ ಜಿಲ್ಲಾಧಿಕಾರಿಗಳ ಪತ್ರವನ್ನು ಈ ಸುತ್ತೋಲೆಯೊಂದಿಗೆ ಅಡಕಗೊಳಿಸಿ ಸಲ್ಲಿಸಲಾಗಿದ್ದು, ಸೂಚಿತ ಕಾರ್ಯಕ್ರಮಗಳನ್ನು ಆಯೋಜಿಸಲು ನಿಯಮಾನುಸಾರ ಕ್ರಮವಹಿಸಿ, ಕಾರ್ಯಕ್ರಮಗಳನ್ನು ಆಯೋಜಿಸಿದ ಬಗ್ಗೆ ವರದಿಯನ್ನು ನೇರವಾಗಿ ಮಾನ್ಯ ಜಿಲ್ಲಾಧಿಕಾರಿಗಳಿಗೆ ಹಾಗೂ ತುಮಕೂರು ಜಿಲ್ಲಾ ಕನ್ನಡ ಮತ್ತು ಸಂಸ್ಕೃತಿ ಇಲಾಖೆಗೆ ಕಳುಹಿಸಿಕೊಡುವಂತೆ ತಿಳಿಸಲಾಗಿದೆ.

ಕುಲಸಚಿವರು
ಕುಲಸಚಿವರು
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು.

ಗೆ,

ಪ್ರಾಂಶುಪಾಲರು, ಎಲ್ಲಾ ಸಂಯೋಜಿತ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.

ಪ್ರತಿಗಳು:

1. ಸಿಸ್ಟಮ್ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು: (ವಿವಿ ಜಾಲತಾಣದಲ್ಲಿ ಭಿತ್ತರಿಸುವಂತೆ ಸಂಯೋಜಿತ ಕಾಲೇಜುಗಳ ಮುಖ್ಯಸ್ಥರುಗಳಿಗೆ ಸಂದೇಶವನ್ನು ಕಳುಹಿಸುವಂತೆ ಸೂಚಿಸಿದೆ)
2. ಕಚೇರಿ ಪ್ರತಿ.

ಕರ್ನಾಟಕ ಸರ್ಕಾರ

ಕ್ರ:ಕಸಂತು:29:ಭಾ.ಸ್ವಾ.ದಿನಾಚರಣೆ:2024-25

ಜಿಲ್ಲಾಧಿಕಾರಿಗಳ ಕಾರ್ಯಾಲಯ
ಮಿನಿವಿಧಾನಸೌಧ, ತುಮಕೂರು
ದಿನಾಂಕ:09-08-2024

ಕುಲಸಚಿವರು
ತುಮಕೂರು ವಿಶ್ವವಿದ್ಯಾಲಯ
ತುಮಕೂರು.

ಮಾನ್ಯರೇ,

ವಿಷಯ: 75ನೇ ಭಾರತ ಸ್ವಾತಂತ್ರ್ಯ ಅಮೃತಮಹೋತ್ಸವದ ಹಿನ್ನಲೆಯಲ್ಲಿ ಹಮ್ಮಿಕೊಳ್ಳಲಾಗಿರುವ 'ಹರ್ ಘರ್ ತಿರಂಗಾ' ಅಭಿಯಾನದ ಅಂಗವಾಗಿ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಕುರಿತು.

ಉಲ್ಲೇಖ: ಸರ್ಕಾರದ ಕಾರ್ಯದರ್ಶಿಗಳು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು - ಇವರ ಅಧ್ಯಕ್ಷತೆಯಲ್ಲಿ ದಿನಾಂಕ:09-08-2024ರಂದು ನಡೆದ ಸಭೆಯ ಸೂಚನೆಗಳಂತೆ.

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಸೂಚನೆಯಂತೆ, ಭಾರತ ಸ್ವಾತಂತ್ರ್ಯ ಅಮೃತ ಮಹೋತ್ಸವದ ಹಿನ್ನಲೆಯಲ್ಲಿ "ಹರ್ ಘರ್ ತಿರಂಗಾ" ಅಭಿಯಾನವನ್ನು ಹಮ್ಮಿಕೊಳ್ಳಲಾಗಿರುತ್ತದೆ. ಉಲ್ಲೇಖದ ಸಭೆಯಲ್ಲಿ ತಿಳಿಸಿರುವಂತೆ ಮುಂದಿನ ದಿ:15-08-2024ರವರೆಗೆ ಜಿಲ್ಲೆಯಾದ್ಯಂತ ವಿವಿಧ ಕಾರ್ಯಕ್ರಮಗಳನ್ನು ನಡೆಸಲು ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಲಾಗುತ್ತಿದೆ. ಇದರಡಿ

1) ತಮ್ಮ ವಿಶ್ವವಿದ್ಯಾಲಯದಿಂದ ಕಾಲೇಜು ವಿದ್ಯಾರ್ಥಿ / ವಿದ್ಯಾರ್ಥಿನಿಯರನ್ನು ಒಳಗೊಂಡಂತೆ ರಾಷ್ಟ್ರಧ್ವಜಗಳೊಂದಿಗೆ ಮ್ಯಾರಥಾನ್ ಸ್ಪರ್ಧೆಯನ್ನು ಆಯೋಜಿಸುವುದು.
2) ಎಲ್ಲಾ ಕಾಲೇಜುಗಳಲ್ಲಿ ಈ ಅಭಿಯಾನದ ಅಂಗವಾಗಿ ವೈವಿಧ್ಯಮಯ ಕಾರ್ಯಕ್ರಮಗಳನ್ನು ಆಯೋಜಿಸುವುದು.
3) ಎಲ್ಲಾ ಕಾಲೇಜುಗಳ ವ್ಯಾಪ್ತಿಯಲ್ಲಿ ಸ್ವಾತಂತ್ರೋತ್ಸವದ ಕುರಿತು ಅರಿವು ಮೂಡಿಸುವ ನಿಟ್ಟಿನಲ್ಲಿ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದು.

ಮೇಲ್ಕಂಡ ಕಾರ್ಯಕ್ರಮಗಳನ್ನು ಆಯೋಜಿಸಿ, ಈ ಕುರಿತ ವರದಿಯನ್ನು ಈ ಕಚೇರಿಗೆ ಹಾಗೂ ಸ್ಥಳೀಯ ಕನ್ನಡ ಮತ್ತು ಸಂಸ್ಕೃತಿ ಇಲಾಖೆಗೆ ನೀಡಲು ಕೋರಿದೆ.

ವಂದನೆಗಳೊಂದಿಗೆ,

ತಮ್ಮ ವಿಶ್ವಾಸಿ,

ಜಿಲ್ಲಾಧಿಕಾರಿಗಳು
ತುಮಕೂರು ಜಿಲ್ಲೆ, ತುಮಕೂರು

12/8/24